ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 04–09–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಶಿಕ್ಷಕರ ದಿನಾಚರಣೆ :<br><br>ಉದ್ಘಾಟನೆ:<br><br>ಪ್ರೊ. ರವಿವರ್ಮ ಕುಮಾರ್,<br>ಅಡ್ವೊಕೇಟ್ ಜನರಲ್,<br>ಕರ್ನಾಟಕ ಸರ್ಕಾರ,<br>ಬೆಂಗಳೂರು.<br><br>ಮುಖ್ಯ ಅತಿಥಿಗಳು;<br><br>ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿಗಳು,<br>ಅಧ್ಯಕ್ಷರು,<br>ರಾಮಕೃಷ್ಣ ವಿವೇಕಾನಂದ ಆಶ್ರಮ,<br>ತುಮಕೂರು.<br><br>ಅಧ್ಯಕ್ಷತೆ:<br><br>ಡಾ. ಹೆಚ್. ಶಿವಣ್ಣ,<br>ಕುಲಪತಿಗಳು,<br>ಕೃಷಿ ವಿಶ್ವವಿದ್ಯಾನಿಲಯ,<br>ಬೆಂಗಳೂರು. | 05–09–2015<br>ಶನಿವಾರ<br>ಬೆಳಿಗ್ಗೆ<br>10–00 ಗಂಟೆಗೆ. | ಕುವೆಂಪು ಸಭಾಂಗಣ,<br>ಕೃಷಿ ವಿಶ್ವವಿದ್ಯಾನಿಲಯ,<br>ಗಾಂಧಿ ಕೃಷಿ ವಿಜ್ಞಾನ ಕೇಂದ್ರ,<br>ಬೆಂಗಳೂರು – 560 065 |
| 2. | ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ: | 05–09–2015<br><br>ಶನಿವಾರ | ಡಾ. ಬಿ.ಆರ್. ಅಂಬೇಡ್ಕರ್ ಭವನ,<br>ಮಿಲ್ಲರ್ಸ್ ರಸ್ತೆ, ವಸಂತನಗರ,<br>ಬೆಂಗಳೂರು – 560 052. |

| | | | |
|---|---|---|---|
| | <u>ಉದ್ಘಾಟನೆ:</u><br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br><br><u>ಅಧ್ಯಕ್ಷತೆ:</u><br><br>ಆರ್. ರೋಷನ್ ಬೇಗ್,<br>ಮೂಲ ಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಹಜ್ ಸಚಿವರು.<br><br><u>ಪ್ರಶಸ್ತಿ ಪ್ರದಾನ:</u><br><br>ಕಿಮ್ಮನೆ ರತ್ನಾಕರ,<br>ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಖಾತೆಯ ರಾಜ್ಯ ಸಚಿವರು. | ಮಧ್ಯಾಹ್ನ<br><br>3–00 ಗಂಟೆಗೆ. | |
| 3. | ಬೆಳ್ಳಿ ಸಿನಿಮಾ– ಬೆಳ್ಳಿ ಮಾತು:<br><br>ಜಟ್ಟ ಚಲನಚಿತ್ರ ಪ್ರದರ್ಶನ<br><br>ಚಿತ್ರದ ನಿರ್ದೇಶಕ ಶ್ರೀ ಬಿ.ಎಂ. ಗಿರಿರಾಜ್ ಅವರಿಂದ ಬೆಳ್ಳಿ ಮಾತು– ಸಂವಾದ<br><br>ಅಧ್ಯಕ್ಷತೆ:<br><br>ಶ್ರೀ ಎಸ್.ವಿ. ರಾಜೇಂದ್ರಸಿಂಗ್ ಬಾಬು<br>ಅಧ್ಯಕ್ಷರು ಕರ್ನಾಟಕ ಚಲನಚಿತ್ರ ಅಕಾಡೆಮಿ,<br><br>ಮುಖ್ಯ ಅತಿಥಿಗಳು:<br><br>ಶ್ರೀ ಎಸ್.ಎಸ್. ರಾಜ್‌ಕುಮಾರ್<br>ಚಿತ್ರ ನಿರ್ಮಾಪಕರು | 05–09–2015<br>ಶನಿವಾರ<br>ಸಂಜೆ<br>4–00 ಗಂಟೆಗೆ. | ಚಾಮುಂಡೇಶ್ವರಿ ಸ್ಟುಡಿಯೋ,<br><br>ಮಿಲ್ಲರ್ಸ್ ರಸ್ತೆ,<br><br>ಬೆಂಗಳೂರು |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಪಠ್ಯ ಪುಸ್ತಕ ವೆಬ್‌ಸೈಟ್‌ನಲ್ಲಿ ಅಳವಡಿಕೆ

ಬೆಂಗಳೂರು, ಸೆಪ್ಟೆಂಬರ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಪಠ್ಯ ಪುಸ್ತಕ ಸಂಘದ ನಿರ್ದೇಶನದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯು ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪಠ ಪುಸ್ತಕವನ್ನು ಹಾಗೂ ಸಂಗೀತ ಮತ್ತು ನೃತ್ಯದ ಪಠ್ಯ ಪುಸ್ತಕಗಳನ್ನು ಅಂತರ್ಜಾಲ **www/ktbs.kar.nic.in** ನಲ್ಲಿ ಅಳವಡಿಸಲಾಗಿದೆ ಹಾಗೂ ಇತರೆ ಪಠ್ಯ ಪುಸ್ತಕಗಳು ಬೆಂಗಳೂರಿನ ಬೊಮ್ಮನಹಳ್ಳಿಯ ಹೊಸೂರು ರಸ್ತೆಯಲ್ಲಿರುವ ಸರ್ಕಾರಿ ವಿಭಾಗೀಯ ಪಠ್ಯ ಪುಸ್ತಕಗಳ ಮಳಿಗೆಗಳಲ್ಲಿ ದೊರೆಯುತ್ತದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು:

## "ಜಟ್ಟ" ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ಸೆಪ್ಟೆಂಬರ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಸೆಪ್ಟೆಂಬರ್ 5 ರ ಶನಿವಾರದಂದು ಬೆಳ್ಳಿ ಸಿನಿಮಾ "ಜಟ್ಟ" ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಈ ಚಿತ್ರದ ನಿರ್ದೇಶಕ ಬಿ. ಎಂ. ಗಿರಿರಾಜ್ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಸೆಪ್ಟೆಂಬರ್ 5 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಚಲನಚಿತ್ರ ನಿರ್ಮಾಪಕ ಎನ್. ಎಸ್. ರಾಜ್‌ಕುಮಾರ್ ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್

# ವಾರ್ಷಿಕ ಸಾಮಾನ್ಯ ಸಭೆ

**ಬೆಂಗಳೂರು, ಸೆಪ್ಟೆಂಬರ್ 4 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಸಕ್ಕರೆ ಕಾರ್ಖಾನೆಗಳ ಮಹಾಮಂಡಳಿಯ 47ನೇ ವಾರ್ಷಿಕ ಸಾಮಾನ್ಯ ಸಭೆಯು ಸೆಪ್ಟೆಂಬರ್ 11 ರ ಶುಕ್ರವಾರ ಬೆಳಿಗ್ಗೆ 11–30 ಗಂಟೆಗೆ ಮಲ್ಲೇಶ್ವರಂ ದೇವಸ್ಥಾನ ಬೀದಿಯ 1ನೇ ಮುಖ್ಯರಸ್ತೆಯಲ್ಲಿರುವ ಮಹಾಮಂಡಳಿಯ ಆಡಳಿತ ಮಂಡಳಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಜಂಟಿ ನಿರ್ದೇಶಕರಾಗಿ ಬಸವರಾಜ ಎಂ ಕಂಬಿ



**ಬೆಂಗಳೂರು, ಸೆಪ್ಟೆಂಬರ್ 4 ( ಕರ್ನಾಟಕ ವಾರ್ತೆ ) :**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಬೆಳಗಾವಿ ಜಿಲ್ಲೆಯ ಉಪ ನಿರ್ದೇಶಕ ಶ್ರೀ ಬಸವರಾಜ ಎಂ ಕಂಬಿ ಅವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿನ ಎಲ್ಲ ವಿಭಾಗಗಳ ಮಾಹಿತಿ, ಶಿಕ್ಷಣ ಹಾಗೂ ಸಂವಹನ ಚಟುವಟಿಕೆಗಳ ನಿರ್ವಹಣೆಗಾಗಿ ನಿಯೋಜನೆಯ ಮೇರೆಗೆ ನೇಮಕ ಮಾಡಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ವಶಕ್ಕೆ ನೀಡಿ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ.**

**ಬಸವರಾಜ ಕಂಬಿ ಅವರನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಜಂಟಿ ನಿರ್ದೇಶಕರು(ಆಡಳಿತ) ಆಗಿ ನೇಮಿಸಲಾಗಿದೆ. ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಎಲ್ಲಾ ವಿಭಾಗಗಳ ಮಾಹಿತಿ, ಶಿಕ್ಷಣ ಮತ್ತು ಸಂವಹನ(ಐ.ಇ.ಸಿ.) ವಿಭಾಗದ ಚಟುವಟಿಕೆಗಳ ನಿರ್ವಹಣೆ ಪ್ರಭಾರವನ್ನು ವಹಿಸಿ ಸರ್ಕಾರ ಆದೇಶ ಹೊರಡಿಸಿದೆ.**

**********

**ಡಿ ಪಿ ಎಂ/ಬಾಬು/ಕೆಎಂ**

## <u>ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ</u>

**ಬೆಂಗಳೂರು, ಸೆಪ್ಟೆಂಬರ್ 4, (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:06-09-2015ರ ಭಾನುವಾರದಂದು ಕಬ್ಬನ್ ಉದ್ಯಾನವನದ ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀಮತಿ ಆರ್. ಅಂಬುಜಾಕ್ಷಿ ಮತ್ತು ಸಂಗಡಿಗರಿಂದ ವಿವಿಧ ಸಂಗೀತ ಕಾರ್ಯಕ್ರಮಗಳಾದ ಭಕ್ತಿಗೀತೆ, ಭಾವಗೀತೆ ಹಾಗೂ ಜಾನಪದ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ 4 ಮತ್ತು 9ನೇ ಪಡೆಯ ಬ್ಯಾಂಡ್ ಕಲಾವಿದರು ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ ಆಕರ್ಷಕ "**ಪೊಲೀಸ್ ಬ್ಯಾಂಡ್**" ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಡುತ್ತಾರೆ.

ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಬಾಲಕೃಷ್ಣ ಮತ್ತು ಸಂಗಡಿಗರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ಹಣ್ಣುಗಳಾದ ಪಪ್ಪಾಯ, ಏಲಕ್ಕಿ ಬಾಳೆ, ಮೂಸುಂಬಿ, ನೇರಳೆ(ಜಾಮೂನು) ಹಣ್ಣುಗಳ ಮಾರಾಟ, ಸಾವಯವ ಸೇಬು ಮತ್ತು ಸೀಬೆಹಣ್ಣಿನ ಜ್ಯೂಸ್, ಸಾವಯವ ಸೀಬೆ, ಮಾವಿನ ಹಣ್ಣಿನ ಫ್ರೂಟ್‌ಬಾರ್‌ಗಳು, ಸಾವಯವ ಹಲಸಿನ ಹಣ್ಣಿನ ಚಿಪ್ಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆ ಮಾರಾಟ ಮತ್ತು ಮನೆಗಳಿಗೆ ಅಗತ್ಯವಿರುವ ಗಿಡಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 07.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಹಯೋಗದೊಂದಿಗೆ ವಿದ್ವತ್ ಲಲಿತ್‌ರಾವ್ ಮತ್ತು ವಿದ್ವತ್ ಶಾಂತ ಪೋತಿರವರ ಶಿಷ್ಯರಾದ ಮನೋಹರ್ ಪಟವರ್ಧನ್‌ರವರಿಂದ ಹಿಂದೂಸ್ಥಾನ ಶಾಸ್ತ್ರೀಯ ಸಂಗೀತ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಶಿವೋಹಂ ನೃತ್ಯಶಾಲೆ ವತಿಯಿಂದ ವೈವಿದ್ಯ ನೃತ್ಯ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 10.00 ಗಂಟೆಯಿಂದ ಬೆಳಿಗ್ಗೆ 11.00 ಘಂಟೆಯವರೆಗೆ ವ್ಯಾಸ ಇಂಟರ್‌ನ್ಯಾಷನಲ್ ಸ್ಕೂಲ್, ವಿದ್ಯಾರಣ್ಯಪುರ, ಬೆಂಗಳೂರುರವರ ವತಿಯಿಂದ **ಹ್ಯಾಪಿ ಸಂಡೇ** ಎಂಬ ಶೀರ್ಷಿಕೆಯಡಿ ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಜೇಮ್ಸ್ ಜಾರ್ಜ್ "ಸೋರ್‌ಸೆರಿ ಮ್ಯಾಜಿಕ್" ಕ್ಯಾಲಿಫೋರ್ನಿಯಾ, ಯು.ಎಸ್.ಎ. ರವರಿಂದ ಮ್ಯಾಜಿಕ್ ಷೋ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಪೌಂಢೇಷನ್ ರವರ ಸಹಯೋಗದೊಂದಿಗೆ ಡಾ. ಹೆಚ್.ಎಸ್. ಸತ್ಯನಾರಾಯಣ, ಸಾಹಿತಿಗಳು ಹಾಗೂ ಕನ್ನಡ ಉಪನ್ಯಾಸಕರುರವರಿಂದ ಕನ್ನಡ ಸಾಹಿತ್ಯಕ್ಕೆ ಬೀಚಿಯವರ ಕೊಡುಗೆ ಬಗ್ಗೆ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

### ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಬೆಳಿಗ್ಗೆ 6.30 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಇಂಡಿಯನ್ ಡೈಯಟಿಕ್ ಅಸೋಸಿಯೇಷನ್, ಬೆಂಗಳೂರು ಚಾಪ್ಟರ್ ಬೆಂಗಳೂರುರವರಿಂದ ರಾಷ್ಟ್ರೀಯ ಪೋಷಕಾಂಶ ವಾರದ ಪ್ರಯುಕ್ತ ಸಾರ್ವಜನಿಕರಿಗೆ ಆರೋಗ್ಯದಲ್ಲಿ ಪೋಷಕಾಂಶದ ಮಹತ್ವವನ್ನು ತಿಳಿಸುವ ಸಲುವಾಗಿ ಜಾಗೃತಿ ಕಾರ್ಯಕ್ರಮವನ್ನು ವಿವಿಧ ಆಟಗಳ ಮುಖೇನ ಹಮ್ಮಿಕೊಳ್ಳಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಮೌಂಟ್ ಕಾರ್ಮೆಲ್ ಕಾಲೇಜು, ಬೆಂಗಳೂರಿನ ವಿದ್ಯಾರ್ಥಿಗಳಿಂದ ಸಾಮಾಜಿಕ ಸಮಸ್ಯೆಗಳಾದ ಮಕ್ಕಳ ನಿಂದನೆ, ಮಹಿಳೆ ಮತ್ತು ಕುಟುಂಬದಲ್ಲಿನ ಹಿಂಸೆಯ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಬೀದಿ ನಾಟಕವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ವಿಜಯ್ ಮತ್ತು ಸಂಗಡಿಗರಿಂದ ಪರಿಸರ ಸ್ನೇಹಿ ಗಣೇಶ ಆಚರಣೆ ಬಗ್ಗೆ ಬೀದಿ ನಾಟಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ  ಮಧ್ಯಾಹ್ನ 11.00 ಗಂಟೆಯವರೆಗೆ ಸಹಾಯ ಹೋಲಿಸ್ಟಿಕ್ ಇಂಟೆಗ್ರೇಟೀವ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್, ಜಯನಗರ, ಬೆಂಗಳೂರುರವರ ವತಿಯಿಂದ ಅಯುರ್ವೇದ, ನ್ಯಾಚುರೋಪತಿ, ಹೋಮಿಯೋಪತಿ ಮತ್ತು ಯೋಗ ವಿಧಾನಗಳಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯದ ತಪಾಸಣೆ, ಸಲಹೆಗಳು ಮತ್ತು ಗಿಡಮೂಲಿಕೆಗಳ ಸಿದ್ಧ ಔಷಧದ ಬಗ್ಗೆ ಮಾಹಿತಿ ನೀಡಲಾಗುವುದು.
- ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಘನತ್ಯಾಜ್ಯ ನಿರ್ವಹಣೆ ಮತ್ತು ಅಡುಗೆ ಮನೆಯಲ್ಲಿನ ತ್ಯಾಜ್ಯ (Kitchen Waste) ಉಪಯೋಗಿಸಿ ಗೊಬ್ಬರ ಉತ್ಪತ್ತಿ ಮಾಡುವುದು ಹಾಗೂ ಕಸದಿಂದ ಬಯೋಗ್ಯಾಸ್ ಉತ್ಪಾದನೆಯ ಬಗ್ಗೆ ಶ್ರೀ ಎನ್.ಎಸ್.ರಮಾಕಾಂತ್, Co-Founder, Solid Waste Management Round Table, Bengaluru ರವರಿಂದ ಪ್ರಾತ್ಯಾಕ್ಷಿಕೆ ಮೂಲಕ ತಿಳುವಳಿಕೆ ನೀಡಲಾಗುವುದು.

ಬಾಬು/ಕೆಎಂ

# ಬೇಕರಿ ತರಬೇತಿ

**ಬೆಂಗಳೂರು, ಸೆಪ್ಟೆಂಬರ್ 4 (ಕರ್ನಾಟಕ ವಾರ್ತೆ) :**

**ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಬೇಕರಿ ತರಬೇತಿ ಕೇಂದ್ರ, ಹೆಬ್ಬಾಳ, ಬೆಂಗಳೂರು -24 ಇಲ್ಲಿ 14 ವಾರಗಳ ಬೇಕರಿ ಟೆಕ್ನಾಲಜಿ ತರಬೇತಿ ಆಯೋಜಿಸಲಾಗಿದೆ. ಅಭ್ಯರ್ಥಿಯು ಕನಿಷ್ಠ ಎಸ್.ಎಸ್.ಎಲ್.ಸಿ.. (ಹತ್ತನೇ ತರಗತಿ) ಪಾಸಾಗಿರಬೇಕು. ನಿಗಧಿತ ಅರ್ಜಿ ಫಾರಂಗಳನ್ನು 10/- ರೂ. ಪಾವತಿಸಿ ಪಡೆಯಬಹುದು. ಅರ್ಜಿ ಸಲ್ಲಿಸಲು 19-9-2015 ಕೊನೆಯ ದಿನ. ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು 560 024 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080- 23513370 ಮೂಲಕ ಸಂಪರ್ಕಿಸಬಹುದು.**

**4 ವಾರಗಳ ಬೇಕರಿ ತರಬೇತಿ ಕಾರ್ಯಕ್ರಮವನ್ನು ಆಸಕ್ತಿಯುಳ್ಳ ಬೇಕರಿ ಉದ್ದಿಮೆದಾರರಿಗೆ ಮತ್ತು ಗೃಹಣಿಯರಿಗಾಗಿ ಆಯೋಜಿಸಲಾಗಿದೆ. ದಿನಾಂಕ: 07-9-2015 ರಿಂದ ತರಬೇತಿಯು ಪ್ರಾರಂಭವಾಗಲಿದೆ.**

**ಬಾಬು/ಕೆಎಂ**

# Bakery Training

## Bangalore, September 4, (Karnataka Information)

**Bakery Training Unit, University of Agricultural Sciences, Hebbal, Bangalore -560 024 has invited application for 14 weeks certificate course in Bakery Technology, Minimum qualification required I pass in SSLC/ $10^{th}$ Standard. The applications may be obtained from Bakery Training Unit by paying a fee of Rs. 10/- and the completed application may be sent to Co-ordinator, Bakery Training Unit, UAS, Hebbal, Bangalore -560 024 on or before 19-9-2015. Interested candidates can contact Co-ordinator, Bakery Training Unit, UAS, Hebbal, Bangalore -560 024 personally or through phone 080- 23513370.**

The Bakery raining Unit, Hebbal Bangalore is also conducting 4 weeks training course on Bakery Technology for the benefit of Housewives and Entrepreneurs from 7th September 2015.

babu/km

## ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದಿಂದ 277 ಪ್ರಕರಣ ಇತ್ಯರ್ಥ–ಕಮಲಮ್ಮ

ಬೆಂಗಳೂರು, ಸೆಪ್ಟೆಂಬರ್ 4 (ಕರ್ನಾಟಕ ವಾರ್ತೆ) :

ಸಂವಿಧಾನದ ಅಡಿಯಲ್ಲಿ ಪರಿಶಿಷ್ಟ ಜಾತಿಗಳಿಗೆ ಒದಗಿಸಲಾದ ವಿವಿಧ ರಕ್ಷಣಾ ಕಾರ್ಯದ ಅನುಷ್ಠಾನದ ಮೇಲ್ವಿಚಾರಣೆಯನ್ನು ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ ನೋಡಿಕೊಳ್ಳುತ್ತಿದ್ದು, 2012ರಿಂದ ಇಲ್ಲಿಯವರೆಗೆ ರಾಜ್ಯದ ಪರಿಶಿಷ್ಟ ಜಾತಿ ಜನಾಂಗದವರ ಮೇಲಿನ ದೌರ್ಜನ್ಯ,ಭೂವಿವಾದ, ಸೇವಾ ನ್ಯೂನ್ಯತೆ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ಆಯೋಗದಲ್ಲಿ ದಾಖಲಾಗಿರುವ 954 ಪ್ರಕರಣಗಳ ಪೈಕಿ 277 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗದ ಸದಸ್ಯರಾದ ಶ್ರೀಮತಿ ಪಿ. ಎಂ. ಕಮಲಮ್ಮ ಅವರು ತಿಳಿಸಿದರು.

ಅವರಿಂದು ನಗರದ ಕುಮಾರಕೃಪ ಅತಿಥಿಗೃಹದಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯ ಅಧ್ಯಕ್ಷತೆ ವಹಿಸಿ ಮಾತನ್ನಾಡುತ್ತಾ, ತಮ್ಮ ಈ ಬಾರಿಯ ಕರ್ನಾಟಕ ಪ್ರವಾಸದಲ್ಲಿ ಪರಿಶಿಷ್ಟ ಜಾತಿಯವರ ವಿವಿಧ ವಿಷಯಗಳಿಗೆ ಸ ಂಬಂಧಿಸಿದ 77 ಪ್ರಕರಣಗಳನ್ನು ಆಲಿಸಿದ್ದು ಈ ಪೈಕಿ ಒಟ್ಟು 22 ಪ್ರಕರಣಗಳನ್ನು ಇತ್ಯರ್ಥಪಡಿಸಿರುವುದಾಗಿ ತಿಳಿಸಿದ ಅವರು, ಉನ್ನತ ಶಿಕ್ಷಣ, ಪಶುಸಂಗೋಪನೆ, ಗೃಹ, ಕಂದಾಯ ಇತ್ಯಾದಿ ಇಲಾಖೆಗಳಿಗೆ ಸಂಬಂಧಿಸಿದಂತೆ ಆಯಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು, ಆಯುಕ್ತರು ಸಭೆಯಲ್ಲಿ ಭಾಗವಹಿಸಿ ಆಯೋಗ ನೀಡಿರುವ ಗಡುವಿನೊಳಗಾಗಿ ತಮ್ಮ ಇಲಾಖಾ ವ್ಯಾಪ್ತಿಗೊಳಪಡುವ ಪ್ರಕರಣಗಳನ್ನು ಇತ್ಯರ್ಥಗೊಳಿಸುವುದಾಗಿ ಭರವಸೆ ನೀಡಿರುವುದಾಗಿ ಕಮಲಮ್ಮ ತಿಳಿಸಿದರು.

ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು ಸಹ ಸಭೆಯಲ್ಲಿ ಭಾಗವಹಿಸಿದ್ದು ತಮ್ಮ ಇಲಾಖಾ ವ್ಯಾಪ್ತಿಗೆ ಬರುವಂತಹ 23 ಪ್ರಕರಣಗಳ ಪೈಕಿ 22 ಪ್ರಕರಣಗಳನ್ನು ನಿಗದಿತ ಗಡುವಿನೊಳಗಾಗಿ ಇತ್ಯರ್ಥಗೊಳಿಸುವುದಾಗಿ ಭರವಸೆ ನೀಡಿದ್ದಾರೆ ಎಂದರು.

ತಾವು 2014ರಲ್ಲಿ ಆಯೋಗದ ಸದಸ್ಯರಾಗಿ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿದ್ದು, ದಕ್ಷಿಣ ಪ್ರಾಂತ್ಯದ ಸಂಪೂರ್ಣ ಹೊಣೆಗಾರಿಕೆಯನ್ನು ನೋಡಿಕೊಳ್ಳುತ್ತಿರುವುದಾಗಿ ತಿಳಿಸಿದ ಅವರು, ಇದು ರಾಜ್ಯಕ್ಕೆ ತಮ್ಮ ಎರಡನೇ ಭೇಟಿಯಾಗಿದ್ದು, ಕಳೆದ ಡಿಸೆಂಬರ್ 2104ರ ಮಾಹೆಯಲ್ಲಿ ರಾಜ್ಯಕ್ಕೆ ಭೇಟಿ ನೀಡಿ ಪ್ರಕರಣಗಳನ್ನು ಆಲಿಸಿರುವುದಾಗಿ ತಿಳಿಸಿದರು.

ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗವು ನವದೆಹಲಿಯ ತನ್ನ ಕೇಂದ್ರ ಕಾರ್ಯಾಲಯದಿಂದ ಕಾರ್ಯ ನಿರ್ವಹಿಸುತ್ತಿದ್ದು, 12 ರಾಜ್ಯ ಕಚೇರಿಗಳನ್ನು ಹೊಂದಿದೆ ಎಂದ ಅವರು, ಆಯೋಗವು, ಪರಿಶಿಷ್ಟ ಜಾತಿಗಳ ಕಲ್ಯಾಣಕ್ಕೆ ಸಂಬಂದಿಸಿದಂತೆ ಕಾರ್ಯ ನೀತಿಯನ್ನು ರೂಪಿಸುವ ಹಾಗೂ ಮಾರ್ಗಸೂಚಿಗಳನ್ನು

ಹೊರಡಿಸುವ ಬಗ್ಗೆ ಗಮನಹರಿಸಿ ತನ್ನ ಕಾರ್ಯವಿಧಾನದ ಮೇಲ್ವಿಚಾರಣೆ ಸಂಬಂಧವಾಗಿ ರಾಷ್ಟ್ರಪತಿಯವರಿಗೆ ಕಾಲಕಾಲಕ್ಕೆ ತನ್ನ ವರದಿಯನ್ನು ಸಲ್ಲಿಸುತ್ತದೆ ಎಂದು ವಿವರಿಸಿದರು.

ಮಮತಾ

## ಶಿಕ್ಷಕರ ದಿನಾಚರಣೆ: ಉಪ ಸಭಾಪತಿ ಸಂದೇಶ

**ಬೆಂಗಳೂರು, ಸೆಪ್ಟೆಂಬರ್ 4 (ಕರ್ನಾಟಕ ವಾರ್ತೆ) :**

ವಿಧಾನ ಪರಿಷತ್ತಿನ ಉಪ ಸಭಾಪತಿ ಶ್ರೀ ಮರಿತಿಬ್ಬೇಗೌಡ ಅವರು ಶಿಕ್ಷಕರ ದಿನಾಚರಣೆ ಅಂಗವಾಗಿ ಶಿಕ್ಷಕರಿಗೆ ಶುಭ ಹಾರೈಸಿದ್ದಾರೆ. ತಮ್ಮ ಸಂದೇಶದಲ್ಲಿ ಅವರು ಭಾರತ ಪುಣ್ಯಭೂಮಿಯ ಮಡಿಲಲ್ಲಿ ಜನಿಸಿದ ಮಹಾನ್ ವ್ಯಕ್ತಿ ಡಾ: ಸರ್ವಪಲ್ಲಿ ರಾಧಕೃಷ್ಣನ್ ಅವರು ಆದರ್ಶ ಶಿಕ್ಷಕರಾಗಿ, ತತ್ವಜ್ಞಾನಿಯಾಗಿ, ರಾಜಕೀಯ ಮುತ್ಸದ್ದಿಯಾಗಿ, ಮಾನವತವಾದಿಯಾಗಿ, ದೇಶದ ರಾಷ್ಟ್ರಪತಿಯಾಗಿ, ಉಪ ರಾಷ್ಟ್ರಪತಿಯಾಗಿ ದೇಶಕ್ಕೆ ಅಪಾರ ಸೇವೆ ಸಲ್ಲಿಸಿದ "ಶಿಕ್ಷಣ ತಜ್ಞರಾದ" ರಾಧಾಕೃಷ್ಣನ್ ಅವರ 126 ನೆಯ ಜನ್ಮದಿನಾಚರಣೆಯನ್ನು ಸೆಪ್ಟೆಂಬರ್ 5 ರಂದು ದೇಶಾದ್ಯಂತ ಶಿಕ್ಷಕರ ದಿನಾಚರಣೆಯನ್ನಾಗಿ ಆಚರಿಸುವ ಮೂಲಕ ಶಿಕ್ಷಕ ಬಂಧುಗಳಿಗೆ ಸಲ್ಲಿಸುವ ಅತ್ಯಂತ ಗೌರವಯುತ ಹಾಗೂ ಶ್ರೇಷ್ಠ ದಿನವಾಗಿದೆ ಎಂದು ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಮಮತ/ಕೆಎಂ

## ಉತ್ತರ ಕನ್ನಡ ಜಿಲ್ಲೆಯ ಜೊಯಿಡ (ಸೂಪ): ಬರಪೀಡಿತ ತಾಲ್ಲೂಕು ಘೋಷಣೆ

**ಬೆಂಗಳೂರು, ಸೆಪ್ಟೆಂಬರ್ 4 (ಕರ್ನಾಟಕ ವಾರ್ತೆ) :**

ಉತ್ತರ ಕನ್ನಡ ಜಿಲ್ಲೆಯ ಜೊಯಿಡ (ಸೂಪ) ತಾಲ್ಲೂಕನ್ನು ನೀರಾವರಿ ಅಚ್ಚುಕಟ್ಟು ಪ್ರದೇಶಗಳನ್ನು ಹೊರತುಪಡಿಸಿ ತಾತ್ಕಾಲಿಕವಾಗಿ ಬರಪೀಡಿತ ತಾಲ್ಲೂಕು ಎಂದು ಘೋಷಿಸಿ ಸರ್ಕಾರ ಆದೇಶಿಸಿದೆ.

ಬರಪೀಡಿತ ಪ್ರದೇಶವೆಂದು ಘೋಷಿಸಿರುವ ಉತ್ತರ ಕನ್ನಡ ಜಿಲ್ಲೆಯ ಜೋಯಿಡ(ಸೂಪ) ತಾಲ್ಲೂಕು/ಹೋಬಳಿಗಳಲ್ಲಿ ಭೂರಹಿತ ಕಾರ್ಮಿಕರು, ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಉದ್ಯೋಗ ಒದಗಿಸುವ ಕ್ರಮ, ಕುಡಿಯುವ ನೀರು ಸರಬರಾಜು, ಮೇವು ಸರಬರಾಜು ಮತ್ತು ಜಾನುವಾರು ಸಂರಕ್ಷಣೆ ಇತ್ಯಾದಿ ಬರಪರಿಹಾರ ಕಾರ್ಯಗಳನ್ನು ಮಾತ್ರ ಎಸ್.ಡಿ.ಆರ್.ಎಫ್./ಎನ್.ಡಿ.ಆರ್. ಎಫ್ ಮಾರ್ಗಸೂಚಿಯ ಪ್ರಕಾರ ಕೈಗೊಳ್ಳಲು ಆದೇಶಿಸಿದೆ.

ಮಮತ/ಕೆಎಂ